ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ,ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12**

ಸಂಖ್ಯೆ: ಪಪೂಶಿಇ/ಪರೀಕ್ಷೆ/ನೊ&ಫ/2018-19 ದಿನಾಂಕ: 01.06.2018.

**ಸುತ್ತೋಲೆ**

**ವಿಷಯ:** 2018ರ ಜೂನ್ ತಿಂಗಳಿನಲ್ಲಿ ನಡೆಸುವ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಪುನರಾವರ್ತಿತ (Repeater) ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿಯ ಸುತ್ತೋಲೆ ಸಂಖ್ಯೆ ಪಪೂಶಿಇ/ಪರೀಕ್ಷೆ/ನೊ&ಫ/ಮಾ-18/2017-18 ದಿನಾಂಕ: 14-05-2018.
2. ಈ ಕಛೇರಿಯ ಸುತ್ತೋಲೆ ಸಂಖ್ಯೆ ಪಪೂಶಿಇ/ಪರೀಕ್ಷೆ/ನೊ&ಫ/ಮಾ-18/2017-18 ದಿನಾಂಕ: 17-05-2018.
3. ಈ ಕಛೇರಿಯ ಸುತ್ತೋಲೆ ಸಂಖ್ಯೆ ಪಪೂಶಿಇ/ಪರೀಕ್ಷೆ/ನೊ&ಫ/ಮಾ-18/2017-18 ದಿನಾಂಕ: 21-05-2018.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಜೂನ್-2018ರಲ್ಲಿ ನಡೆಸಲಾಗುವ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗಳಿಗೆ ರಿಪೀಟರ್ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಉಲ್ಲೇಖಿತ ಸುತ್ತೋಲೆ ಅನ್ವಯ ವಿವಿಧ ದಿನಾಂಕಗಳನ್ನು ನಿಗಧಿಪಡಿಸಲಾಗಿತ್ತು. ವಿದ್ಯಾರ್ಥಿಗಳ ಹಾಗೂ ಪೋಷಕರ ಮನವಿ ಮೇರೆಗೆ ಜೂನ್-2018, ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಅರ್ಜಿ ಸಲ್ಲಿಸಲು / ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕಡೇ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ವಿಸ್ತರಿಸಲಾದ ಕಡೇ ದಿನಾಂಕ | ಕಾಲೇಜಿನವರು ವಿಸ್ತರಿಸಲಾದ ದಿನಾಂಕಗಳಲ್ಲಿ ಸ್ವೀಕರಿಸಿದ ಪರೀಕ್ಷಾ ಶುಲ್ಕವನ್ನು ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ತಲುಪಿಸುವ ದಿನಾಂಕ |
|---|---|---|
| 06-06-2018 | 07-06-2018 | 07-06-2018 |

**ಪರೀಕ್ಷಾ ಶುಲ್ಕ ಪಾವತಿಸಲು ವಿಸ್ತೃತ ದಿನಾಂಕಗಳಲ್ಲಿ ಪರೀಕ್ಷಾ ಶುಲ್ಕದ ಜೊತೆಗೆ ಒಟ್ಟು 200/- ರೂ. ದಂಡ ಶುಲ್ಕ ಪಾವತಿಸಬೇಕಾಗಿರುತ್ತದೆ.**

ಸದರಿ ಪರೀಕ್ಷೆಗಳಿಗೆ ರಿಪೀಟರ್ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಲ್ಲಿಸಲು **ಇದೇ ಅಂತಿಮ ಅವಕಾಶವಾಗಿರುತ್ತದೆ** ಆದಕಾರಣ ಮೇಲೆ ತಿಳಿಸಿರುವ ದಿನಾಂಕದ ನಂತರ ಕಾಲೇಜಿನ ಪ್ರಾಂಶುಪಾಲರು ಯಾವುದೇ ಪುನರಾವರ್ತಿತ ಅಭ್ಯರ್ಥಿಗಳ ಅರ್ಜಿಗಳನ್ನು ಸ್ವೀಕರಿಸಕೂಡದು. ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕವನ್ನು ಮತ್ತೊಮ್ಮೆ ವಿಸ್ತರಿಸಲಾಗುವುದಿಲ್ಲ.

ಜಿಲ್ಲಾ ಉಪನಿರ್ದೇಶಕರು ಒಂದೇ ಕಂತಿನಲ್ಲಿ ಎಲ್ಲಾ ಪುನರಾವರ್ತಿತ ಅಭ್ಯರ್ಥಿಗಳ ಅರ್ಜಿಗಳನ್ನು ಖುದ್ದಾಗಿ ಇಲಾಖೆಗೆ ದಿನಾಂಕ 08-06-2018ರಂದು ಕೇಂದ್ರ ಕಛೇರಿಗೆ ಸಲ್ಲಿಸುವುದು.

1/6/18

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿಗಳು:**
1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ - ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ಪರೀಕ್ಷಾ ಶಾಖೆಯ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ.
4. ಗಣಕ ಶಾಖೆಗೆ.
5. ಇಲಾಖಾ ಇ-ಆಡಳಿತ ಶಾಖೆ. (ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು).